# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 156 |
| ಸದಸ್ಯರ ಹೆಸರು | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 14.12.2021 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮರಳಿನ ಸಮಸ್ಯೆಗಳು ದಿನೇ ದಿನೇ ಹೆಚ್ಚಾಗುತ್ತಿದ್ದು, ಜನ ಸಾಮಾನ್ಯರು ಸಂಕಷ್ಟ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಮರಳಿನ ಸಮಸ್ಯೆಗಳಿಂದ ಜನಸಾಮಾನ್ಯರ ಸಂಕಷ್ಟ ಗಳನ್ನು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಸೂಕ್ತ ಕ್ರಮಗಳೇನು; | ಬಂದಿರುತ್ತದೆ.<br><br>ಸಾರ್ವಜನಿಕರಿಗೆ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಬೇಡಿಕೆಗೆ ತಕ್ಕಂತೆ ನಿಗದಿತ ದರದಲ್ಲಿ ಮರಳು ಪೂರೈಕೆ ಮಾಡಲು ದಿನಾಂಕ 05.05.2020 ರಂದು ಹೊಸ ಮರಳು ನೀತಿ, 2020ನ್ನು ಜಾರಿಗೆ ತರಲಾಗಿದೆ. ಈ ಸಂಬಂಧ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ಕ್ಕೆ ತಿದ್ದುಪಡಿ ತಂದು ದಿನಾಂಕ 01.12.2021 ರಂದು (ತಿದ್ದುಪಡಿ) ನಿಯಮಗಳು, 2021 ನ್ನು ಜಾರಿಗೊಳಿಸಲಾಗಿರುತ್ತದೆ. |
| ಆ) | ಮರಳಿನ ಬೆಲೆ ವಿಪರೀತ ಹೆಚ್ಚಾಗುತ್ತಿದ್ದು, ಮರಳಿನ ದರ ನಿಗದಿ ಮಾಡಿ ಬೇಕಾಬಿಟ್ಟಿ ದರ ಏರಿಸುತ್ತಿರುವ ದಂದೆಕೋರರಿಗೆ ಕಡಿವಾಣ ಹಾಕಲು ಸರ್ಕಾರ ಏನು ಕ್ರಮಗಳನ್ನು ತೆಗೆದುಕೊಂಡಿದೆ; (ವಿವರ ನೀಡುವುದು) | • ಹೊಸ ಮರಳು ನೀತಿ, 2020 ರಲ್ಲಿ, ಸರ್ಕಾರದಿಂದ ಅಧಿಸೂಚನೆ ಮೂಲಕ ನಿಗದಿಪಡಿಸಿದ ಸರ್ಕಾರಿ ಸ್ವಾಮ್ಯದ ಸಂಸ್ಥೆ / ನಿಗಮ / ಮಂಡಳಿ / ಕಾರ್ಪೋರೇಷನ್ ವತಿಯಿಂದ ಮರಳು ಗಣಿಗಾರಿಕೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• ಅದರಂತೆ, I, II & III ನೇ ಶ್ರೇಣಿಯ ಹಳ್ಳ / ತೊರೆಗಳಲ್ಲಿ ಹಾಗೂ ಕೆರೆಗಳು ಲಭ್ಯವಿರುವ ಮರಳನ್ನು ತೆಗೆದು ವಿಲೇವಾರಿ ಮಾಡಲು ಸಂಬಂಧಿಸಿದ ಗ್ರಾಮ ಪಂಚಾಯಿತಿಗಳಿಗೆ ಹಾಗೂ IV V & VI ನೇ ಶ್ರೇಣಿಯ ಹೊಳೆ / ನದಿಗಳಲ್ಲಿ ಮತ್ತು ಅಣೆಕಟ್ಟು / ಜಲಾಶಯ / ಬ್ಯಾರೇಜ್ ಹಾಗೂ ಅಣೆಕಟ್ಟಿನ ಹಿನ್ನೀರಿನ ಪ್ರದೇಶದಲ್ಲಿ ಹೂಳಿನೊಂದಿಗೆ ದೊರೆಯುವ ಮರಳು ತೆಗೆದು ಮಾರಾಟ ಮಾಡಲು ಮೆ\|\| ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ (KSMCL) ಮತ್ತು ಮೆ\|\| ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ (HGML) ಇವರಿಗೆ ವಹಿಸಲಾಗಿರುತ್ತದೆ.<br>• ಸದರಿ ಸಂಸ್ಥೆಗಳಿಂದ ಮಾರಾಟ ಮಾಡುವ ಪ್ರತಿ ಮೆಟ್ರಿಕ್ ಟನ್ ಮರಳಿಗೆ ಈ ಕೆಳಕಂಡಂತೆ ಸ್ಥಿರ ದರವನ್ನು ನಿಗದಿಪಡಿಸಲಾಗಿರುತ್ತದೆ. |

-2